# ಮಂಡ್ಯ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿಯಮಿತ., ಮಂಡ್ಯ

**ಅಂಚೆ ಪೆಟ್ಟಿಗೆ:14, ಕೇಂದ್ರ ಕಛೇರಿ: ಮಾರ್ಕೆಟ್ ರಸ್ತೆ, ಮಂಡ್ಯ- 571 401.** (ಕರ್ನಾಟಕ ರಾಜ್ಯ)

E-mail:mdy_dccb@rediffmail.com website: www.mandyadccbank.com ದೂರವಾಣಿ ಸಂಖ್ಯೆ:08232:226010-226011


ಸಂಖ್ಯೆ:ಆಡಳಿತ:ಸಿಬ್ಬಂದಿ:ನೇಮಕಾತಿ:10:2023-24 ದಿನಾಂಕ:18-01-2024

## ನೇಮಕಾತಿ ಪ್ರಕಟಣೆ

ಮಂಡ್ಯ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ., ಮಂಡ್ಯ ಇದರಲ್ಲಿ ಖಾಲಿ ಇರುವ ಈ ಕೆಳಕಂಡ ಹುದ್ದೆಯ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ONLINE ಮುಖಾಂತರ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಆಸಕ್ತಿಯುಳ್ಳ ಅಭ್ಯರ್ಥಿಗಳು ಬ್ಯಾಂಕಿನ ಅಧಿಕೃತ ವೆಬ್‌ಸೈಟ್ **www.mandyadccbank.com** ನಲ್ಲಿ ನೀಡಿರುವ ಲಿಂಕ್ ಮುಖಾಂತರ ಅರ್ಜಿಯನ್ನು ಸಲ್ಲಿಸತಕ್ಕದ್ದು. **ಅರ್ಜಿಗಳನ್ನು ಖುದ್ದಾಗಿ/ ಅಂಚೆ/ ಕೋರಿಯರ್ ಇತ್ಯಾದಿಗಳ ಮೂಲಕ ಪ್ರತ್ಯೇಕವಾಗಿ ಕಳುಹಿಸಲು ಅವಕಾಶವಿಲ್ಲ**. ನೇಮಕಾತಿ ಮಾಡಲು ಉದ್ದೇಶಿಸಿರುವ ಒಂದು ಹುದ್ದೆಯನ್ನು ಸರ್ಕಾರಿ ಆದೇಶದ ಪ್ರಕಾರ ಈ ಕೆಳಕಂಡಂತೆ ವರ್ಗೀಕರಿಸಿ ಮೀಸಲಿರಿಸಲಾಗಿದೆ.

**A) ಹುದ್ದೆಯ ಹೆಸರುಃ "ಮಧ್ಯಮ ಆಡಳಿತ ವೃಂದ"–ಮಾಹಿತಿ ತಂತ್ರಜ್ಞಾನ ಮುಖ್ಯ ವ್ಯವಸ್ಥಾಪಕರು, ಗ್ರೇಡ್-I**

**(Information Technology Chief Manager. Grade-I): ಹುದ್ದೆ ಸಂಖ್ಯೆ :01**

**ವೇತನ ಶ್ರೇಣಿ: ರೂ.43100 - 83900.**

| ವರ್ಗ | ಸಾಮಾನ್ಯ ಅಭ್ಯರ್ಥಿ (ಇತರೆ) | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗ ವಿಕಲ ಅಭ್ಯರ್ಥಿ | ಮಾಜಿ ಸೈನಿಕ ಅಭ್ಯರ್ಥಿ | ಕನ್ನಡ ಮಾಧ್ಯಮ ಅಭ್ಯರ್ಥಿ | ಯೋಜನಾ ನಿರಾಶ್ರಿತ ಅಭ್ಯರ್ಥಿ | ತೃತೀಯ ಲಿಂಗ ಅಭ್ಯರ್ಥಿ | ಒಟ್ಟು ಹುದ್ದೆಗಳು |
|---|---|---|---|---|---|---|---|---|---|
| ಸಾಮಾನ್ಯ | 1 | - | - | - | - | - | - | - | 1 |
| ಪರಿಶಿಷ್ಟ ಜಾತಿ | - | - | - | - | - | - | - | - | - |
| ಪರಿಶಿಷ್ಟ ಪಂಗಡ | - | - | - | - | - | - | - | - | - |
| ಪ್ರವರ್ಗ–1 | - | - | - | - | - | - | - | - | - |
| ಪ್ರವರ್ಗ–2ಎ | - | - | - | - | - | - | - | - | - |
| ಪ್ರವರ್ಗ–2ಬಿ | - | - | - | - | - | - | - | - | - |
| ಪ್ರವರ್ಗ–3ಎ | - | - | - | - | - | - | - | - | - |
| ಪ್ರವರ್ಗ–3ಬಿ | - | - | - | - | - | - | - | - | - |
| **ಒಟ್ಟು** | **1** | **-** | **-** | **-** | **-** | **-** | **-** | **-** | 1 |

**ಶೈಕ್ಷಣಿಕ ವಿದ್ಯಾರ್ಹತೆ:**

ಸರ್ಕಾರದ ಮಾನ್ಯತೆ ಪಡೆದ ಅಂಗೀಕೃತ ವಿಶ್ವ ವಿದ್ಯಾಲಯದಲ್ಲಿ ಕಂಪ್ಯೂಟರ್ ಸೈನ್ಸ್‌ನಲ್ಲಿ ಎಂ.ಟೆಕ್ ಸ್ನಾತಕೊತ್ತರ ಪದವಿಯಲ್ಲಿ ತೇರ್ಗಡೆಯಾಗಿರಬೇಕು. ಕನ್ನಡವನ್ನು ಓದುವ ಸಾಮಾರ್ಥ್ಯದ ಜೊತೆಗೆ ಕನ್ನಡದ ಜ್ಞಾನ, ಬರೆಯುವಿಕೆ, ಕನ್ನಡವನ್ನು ಸ್ವಚ್ಛವಾಗಿ ಮಾತನಾಡಬೇಕು ಮತ್ತು ಅರ್ಥ ಮಾಡಿಕೊಳ್ಳಬೇಕು.

**ಶೈಕ್ಷಣಿಕ ವಿದ್ಯಾರ್ಹತೆ ವಿಶೇಷ ಸೂಚನೆ:** ಅರ್ಜಿಗಳನ್ನು ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅನುಸೂಚಿಯಲ್ಲಿ ಹುದ್ದೆಗೆ ಸೂಚಿಸಿರುವ ಕನಿಷ್ಠ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಹೊಂದಿರತಕ್ಕದ್ದು. ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಹೊಂದದೆ ಹೆಚ್ಚಿನ ವಿದ್ಯಾರ್ಹತೆಯ ಆಧಾರದ ಮೇಲೆ ಅರ್ಜಿ ಸಲ್ಲಿಸಿದ್ದಲ್ಲಿ ಅಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅಭ್ಯರ್ಥಿಗಳು ಅರ್ಜಿಯಲ್ಲಿ ಎಲ್ಲಾ ಸೆಮಿಸ್ಟರ್/ ವರ್ಷಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ಮತ್ತು ಪಡೆದಿರುವ ಅಂಕಗಳನ್ನು ಕ್ರೂಢೀಕರಿಸಿ ಸರಾಸರಿ ಅಂಕಗಳನ್ನು ಸ್ಪಷ್ಟವಾಗಿ ನಮೂದಿಸುವುದು. ಗ್ರೇಡ್ ಅಂಕಗಳನ್ನು ಪಡೆದ ಅಭ್ಯರ್ಥಿಗಳು, ಗ್ರೇಡ್ ಅಂಕಗಳನ್ನು ಶೇಕಡವಾರು ಅಂಕಗಳಿಗೆ ಪರಿವರ್ತಿಸಿ ವಿಶ್ವವಿದ್ಯಾಲಯ ನೀಡಿರುವ ಪ್ರಮಾಣ ಪತ್ರದಲ್ಲಿ ನಮೂದಿಸಿರುವ ಶೇಕಡವಾರು ಅಂಕಗಳನ್ನು ತಪ್ಪದೇ ನಮೂದಿಸುವುದು.

ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:-

| | |
|---|---|
| GM = General Merit = ಸಾಮಾನ್ಯ ಅರ್ಹತೆ | 3B=Category 3B= ಪ್ರವರ್ಗ-3ಬಿ |
| SC = Scheduled Caste= ಪರಿಶಿಷ್ಟ ಜಾತಿ | Rural = Rural Candidate= ಗ್ರಾಮೀಣ ಅಭ್ಯರ್ಥಿ |
| ST = Scheduled Tribe= ಪರಿಶಿಷ್ಟ ಪಂಗಡ | PH = Physically Handicapped= ಅಂಗವಿಕಲ ಅಭ್ಯರ್ಥಿ |
| C-I = Category I= ಪ್ರವರ್ಗ-1 | Ex-MP=Ex-Military Person= ಮಾಜಿ ಸೈನಿಕ ಅಭ್ಯರ್ಥಿ |
| 2A=Category 2A= ಪ್ರವರ್ಗ-2ಎ | KMS= Kannada Medium Student= ಕನ್ನಡ ಮಾಧ್ಯಮ ಅಭ್ಯರ್ಥಿ |
| 2B = Category 2B= ಪ್ರವರ್ಗ-2ಬಿ | PDP = Project Displaced Person= ಯೋಜನಾ ನಿರಾಶ್ರಿತ ಅಭ್ಯರ್ಥಿ |
| 3A = Category 3A= ಪ್ರವರ್ಗ-3ಎ | TG= Transgender= ತೃತೀಯ ಲಿಂಗ ಅಭ್ಯರ್ಥಿ |

**1) ಸೂಚನೆಃ-**

1. ಈ ನೇಮಕಾತಿ ಪ್ರಕಟಣೆಯಲ್ಲಿ ತಿಳಿಸಿರುವ ಹುದ್ದೆಯ ಸಂಖ್ಯೆ ಮತ್ತು ವರ್ಗೀಕರಣವು ಅನಿವಾರ್ಯ ಸಂದರ್ಭದಲ್ಲಿ ಬದಲಾವಣೆಯಾಗಬಹುದಾಗಿದ್ದು, ನೇಮಕಾತಿ ಪ್ರಾಧಿಕಾರವು ಬದಲಾವಣೆ ಮಾಡುವ ಮತ್ತು ರದ್ದುಪಡಿಸುವ ಅಧಿಕಾರವನ್ನು ಕಾಯ್ದಿರಿಸಿಕೊಂಡಿದೆ.
2. ಅಭ್ಯರ್ಥಿಗಳು ಒಂದು ಹುದ್ದೆಗೆ ಒಂದೇ ಅರ್ಜಿ ಸಲ್ಲಿಸತಕ್ಕದ್ದು, ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ, ಅರ್ಹತೆ ಪಡೆದ ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು.
3. ಅರ್ಜಿಗಳನ್ನು ಆನ್‌ಲೈನ್ **(ONLINE)** ಮುಖಾಂತರ ಮಾತ್ರ ಸಲ್ಲಿಸತಕ್ಕದ್ದು, ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಅಥವಾ ಕೊರಿಯರ್ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ.
4. ಅಭ್ಯರ್ಥಿಗಳು ಅರ್ಜಿಯನ್ನು ಆನ್‌ಲೈನ್ **(ONLINE)** ನಲ್ಲಿ ನೀಡಿರುವ ಸೂಚನೆಗಳನ್ವಯ ಭರ್ತಿ ಮಾಡತಕ್ಕದ್ದು.
5. ಅಭ್ಯರ್ಥಿಗಳು ಆನ್‌ಲೈನ್ **(ONLINE)** ಮೂಲಕ ಸಲ್ಲಿಸುವ ಅರ್ಜಿಗಳಲ್ಲಿ ಅಪೂರ್ಣ ಹಾಗೂ ಅಸ್ಪಷ್ಟ ದಾಖಲೆಗಳನ್ನು ಅಥವಾ ತಪ್ಪು/ ಅಪೂರ್ಣ ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
6. ಬ್ಯಾಂಕಿನ ಈ ನೇಮಕಾತಿ ಪ್ರಕಟಣೆಗಳಲ್ಲಿನ ಮಾಹಿತಿ ಹಾಗೂ ಸೂಚನೆಗಳನ್ನು ಪೂರ್ಣವಾಗಿ ಅರಿಯದೆ ಅಭ್ಯರ್ಥಿಗಳು ತಪ್ಪೆಸಗಿದಲ್ಲಿ ಬ್ಯಾಂಕು ಜವಾಬ್ದಾರರಾಗುವುದಿಲ್ಲ.
7. ನಿಗದಿತ ಅರ್ಜಿ ಶುಲ್ಕ ಸಂದಾಯ ಮಾಡದಿದ್ದಲ್ಲಿ ಅಂತಹ ಅರ್ಜಿಯನ್ನು ತಿರಸ್ಕರಿಸಲಾಗುವುದು.
8. ಈ ನೇಮಕಾತಿ ಸಂಬಂಧ ಅಭ್ಯರ್ಥಿಗಳು ಸ್ಪಷ್ಟೀಕರಣ, ಪ್ರಶ್ನೋತ್ತರಗಳು, ತಕರಾರು ಮತ್ತು ಇತ್ಯಾದಿಗಳಿಗೆ ಪತ್ರ/ ಇ-ಮೇಲ್ ವ್ಯವಹಾರಗಳಿಗೆ ಯಾವುದೇ ಅವಕಾಶಗಳು ಇರುವುದಿಲ್ಲ.
9. ಅಭ್ಯರ್ಥಿಯು ಸಂಬಂಧಪಟ್ಟ ವಿದ್ಯಾರ್ಹತೆಯ ಎಲ್ಲಾ ಅಂಕಪಟ್ಟಿ ಮತ್ತು ಇತರೆ ಎಲ್ಲಾ ಅರ್ಹತಾ ದಾಖಲಾತಿಗಳ ಮೂಲ ಪ್ರಮಾಣ ಪತ್ರಗಳನ್ನು ಅಥವಾ ಸ್ವಯಂ ಧೃಢೀಕರಿಸಿದ ಮೂಲ ದಾಖಲಾತಿಗಳ ಜೆರಾಕ್ಸ್ ಪ್ರತಿಗಳನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡತಕ್ಕದ್ದು.
10. ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಗಳಲ್ಲಿ ಅಪ್‌ಲೋಡ್ ಮಾಡುವ ಮಾಹಿತಿಗಳ ಆಧಾರದ ಮೇಲೆ ಅವರುಗಳು ಲಿಖಿತ ಪರೀಕ್ಷೆಗೆ ಅರ್ಹರೇ ಎಂಬುದನ್ನು ಬ್ಯಾಂಕು ಪರಿಶೀಲಿಸಿ, ಮೇಲ್ನೋಟಕ್ಕೆ ಅರ್ಹರೆಂದು ಕಂಡು ಬಂದ ಅಭ್ಯರ್ಥಿಗಳಿಗೆ ಮಾತ್ರ ಲಿಖಿತ ಪರೀಕ್ಷೆಗೆ ಕರೆಪತ್ರಗಳನ್ನು ಕಳುಹಿಸಲಾಗುತ್ತದೆ. ಆದ್ದರಿಂದ ನಿಗದಿಪಡಿಸಿರುವ ವಿದ್ಯಾರ್ಹತೆಯ ಪ್ರಮಾಣ ಪತ್ರಗಳು, ವಯೋಮಿತಿ, ಮೀಸಲಾತಿ, ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿಗಳನ್ನು ಅಪ್‌ಲೋಡ್ ಮಾಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ.

**2)** ನಿಗದಿತ ಅರ್ಜಿ ಶುಲ್ಕ:

| | |
|---|---|
| ಸಾಮಾನ್ಯ ಅರ್ಹತೆ, ಪ್ರವರ್ಗ 2(ಎ), 2(ಬಿ), 3(ಎ), 3(ಬಿ), ಗೆ ಸೇರಿದ ಅಭ್ಯರ್ಥಿಗಳಿಗೆ | **ರೂ.1500/-** |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಮತ್ತು ಮಾಜಿ ಸೈನಿಕ ಅಭ್ಯರ್ಥಿಗಳಿಗೆ | **ರೂ.750/-** |

<u>**ಅರ್ಜಿ ಶುಲ್ಕವನ್ನು ಪಾವತಿಸುವುದಕ್ಕೆ ಈ ಕೆಳಕಂಡ ವಿಧಾನವನ್ನು ಅನುಸರಿಸುವುದು**</u>:-

ಅರ್ಜಿ ಶುಲ್ಕವನ್ನು Payment Using Net Banking, Credit Card, Debit Card, UPI ಮುಖಾಂತರ ಅರ್ಜಿ ಶುಲ್ಕ ಮತ್ತು Payment Gateway ಚಾರ್ಜಸ್‌ನ್ನು ಪಾವತಿ ಮಾಡತಕ್ಕದ್ದು. **ಶುಲ್ಕವನ್ನು ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕ:16-02-2024ರ ರಾತ್ರಿ 11-59ರ ಒಳಗಾಗಿ ಪಾವತಿಸತಕ್ಕದ್ದು. ಇದನ್ನು ಹೊರತುಪಡಿಸಿ ಡಿ.ಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ** ಹಾಗೂ ಅರ್ಜಿ ಶುಲ್ಕವನ್ನು ನಿಗದಿಪಡಿಸಿದ ಕೊನೆಯ ದಿನಾಂಕ:16-02-2024ರ ರಾತ್ರಿ 11-59ರ ಸಮಯದೊಳಗಾಗಿ ಸಲ್ಲಿಸದೇ ಇರುವಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

**3) ವಯೋಮಿತಿ**:

ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳು ಈ ಕೆಳಗಿನ ವಿವರದಂತೆ ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ನಿಗದಿತ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.

| ವರ್ಗೀಕರಣದ ವಿವರ | ಕನಿಷ್ಠ | ಗರಿಷ್ಠ |
|---|---|---|
| ಸಾಮಾನ್ಯ ವರ್ಗ | 18 | 35 |
| 2ಎ, 2ಬಿ, 3ಎ, 3ಬಿ | 18 | 38 |
| ಪ.ಜಾ./ ಪ.ಪಂ/ ಪ್ರ-1 | 18 | 40 |

**ವಯೋಮಿತಿ ಸಡಿಲಿಕೆ**:ಮೇಲ್ಕಂಡ ವಯೋಮಿತಿಗೆ ಹೆಚ್ಚುವರಿಯಾಗಿ ಈ ಕೆಳಕಂಡಂತೆ ವಯೋಮಿತಿ ಸಡಿಲಿಕೆ ಇರುತ್ತದೆ.

| ಕ್ರ. ಸಂ | ವಿವರ | ವಯೋಮಿತಿ ಸಡಿಲಿಕೆ ಅವಧಿ |
|---|---|---|
| 1 | ಮಾಜಿ ಸೈನಿಕರಿಗೆ | ಮಿಲಿಟರಿ ಸೇವೆಯಲ್ಲಿ ಸೇವೆ ಸಲ್ಲಿಸಿದ ಅವಧಿ |

**4) ಅರ್ಜಿ ಸಲ್ಲಿಸುವ ವಿಧಾನ** :

ಅಭ್ಯರ್ಥಿಗಳು ಬ್ಯಾಂಕಿನ ಅಧಿಕೃತ ವೆಬ್‌ಸೈಟ್ <u>**www.mandyadccbank.com**</u> ಅನ್ನು ತೆರದ ಕೂಡಲೇ ಕಂಪ್ಯೂಟರ್ ಪರದೆಯ ಮೇಲೆ **"Mandya DCC Bank Recruitment 2024"** ಎಂದು ಮೂಡುತ್ತದೆ ಮತ್ತು ಅಧಿಸೂಚನೆ/ಪರೀಕ್ಷಾ ಶುಲ್ಕ ವಿವರಗಳು ಲಭ್ಯವಾಗಲಿದ್ದು, ಅಭ್ಯರ್ಥಿಗಳು ಅಧಿಸೂಚನೆಯಲ್ಲಿನ ವಿವರಗಳನ್ನು ಮತ್ತು ಅರ್ಜಿ ಸಲ್ಲಿಸುವ ಸೂಚನೆಗಳನ್ನು ತಪ್ಪದೇ ಓದಿಕೊಂಡು ಅದರಂತೆ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು. ಆನ್‌ಲೈನ್ ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ತಾಂತ್ರಿಕ ತೊಂದರೆ ಅಥವಾ ಸಮಸ್ಯೆ ಎದುರಾದಲ್ಲಿ ಸಹಾಯವಾಣಿ **(Help line) 9108538218** ಅನ್ನು ಬೆಳಗ್ಗೆ 10.00 ಗಂಟೆಯಿಂದ ಸಂಜೆ 6.00 ಗಂಟೆವರೆಗೆ ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದು.

| | |
|---|---|
| **ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಪ್ರಾರಂಭಿಕ ದಿನಾಂಕ** | **18-01-2024** |
| **ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ** | **16-02-2024** |
| **ಶುಲ್ಕ ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕ** | **16-02-2024** |

**5) ಅಭ್ಯರ್ಥಿಗಳು ONLINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು**:

**ಹಂತ-1:**ಅಭ್ಯರ್ಥಿಗಳು ಬ್ಯಾಂಕಿನ ಅಧಿಕೃತ ವೆಬ್‌ಸೈಟ್ <u>**www.mandyadccbank.com**</u> ಅನ್ನು ತೆರೆದ ಕೂಡಲೆ ಕಂಪ್ಯೂಟರ್ ಪರದೆಯ ಮೇಲೆ **'Mandya DCC Bank Recruitment 2024'** ಎಂದು ಮೂಡುತ್ತದೆ. ಆನ್‌ಲೈನ್ ಅರ್ಜಿಯನ್ನು ಭರ್ತಿ ಮಾಡುವ ಪೂರ್ವದಲ್ಲಿ ಅಧಿಸೂಚನೆ ಮತ್ತು ಸೂಚನೆಗಳನ್ನು ಕಡ್ಡಾಯವಾಗಿ ಓದತಕ್ಕದ್ದು ಮತ್ತು ಅಂತಿಮವಾಗಿ ನಿಯಮ ಮತ್ತು ಷರತ್ತುಗಳನ್ನು ಕೆಳಗಿನ ಚೆಕ್‌ಬಾಕ್ಸ್ ಅನ್ನು ಒತ್ತುವ ಮೂಲಕ ಒಪ್ಪಿಕೊಳ್ಳತಕ್ಕದ್ದು ಮತ್ತು **Open Application** ಗುಂಡಿಯನ್ನು ಒತ್ತಿ ಮುಂದುವರಿಯಿರಿ.


**ಹಂತ-2:**ಸಂಬಂಧಪಟ್ಟ ಹುದ್ದೆಯನ್ನು ಆಯ್ಕೆ ಮಾಡಿ **Apply** ಗುಂಡಿಯನ್ನು ಒತ್ತಿ ಅರ್ಜಿಯನ್ನು ಭರ್ತಿಮಾಡತಕ್ಕದ್ದು. ಅರ್ಜಿಯನ್ನು ಭರ್ತಿಮಾಡಿದ ನಂತರ ನಮೂದಿಸಿದ ವಿವರಗಳನ್ನು ಮತ್ತೊಮ್ಮೆ ಕೂಲಂಕಷವಾಗಿ ಪರಿಶೀಲಿಸಿಕೊಂಡು, ಎಲ್ಲಾ ವಿವರಗಳು ಸರಿಯಾಗಿರುತ್ತವೆಯೆಂದು ಖಚಿತಪಡಿಸಿಕೊಂಡನಂತರ **Preview** ಗುಂಡಿಯನ್ನು ಒತ್ತಿ ಮುಂದುವರಿಯಿರಿ.

**ಹಂತ–3:**ನಿಮ್ಮ ಅರ್ಜಿಯ ಯಾವುದೇ ವಿವರಗಳ ಬದಲಾವಣೆ ಅಗತ್ಯವಿದ್ದರೆ ಪೂರ್ವದರ್ಶನ ಪುಟದಲ್ಲಿ **Edit** ಗುಂಡಿಯನ್ನು ಒತ್ತಿ. ನಿಮ್ಮ ಅರ್ಜಿಯಲ್ಲಿನ ವಿವರಗಳು ಸರಿ ಇರುವುದನ್ನು ಖಚಿತಪಡಿಸಿಕೊಂಡು, ನಿಮ್ಮ ಸಹಿಯೊಂದಿಗಿನ ಪಾಸ್ ಪೋರ್ಟ್ ಗಾತ್ರದ ಸ್ಕ್ಯಾನ್ ಮಾಡಿದ ಭಾವಚಿತ್ರವನ್ನು ಅಪ್‌ಲೋಡ್ ಮಾಡುವ ಬಗ್ಗೆ **Next** ಗುಂಡಿಯನ್ನು ಒತ್ತಿ.

**Note**: ಈ ಹಂತದಲ್ಲಿ ಅಭ್ಯರ್ಥಿಯು ನೊಂದಾಯಿಸಿದ ಇಮೇಲ್ ವಿಳಾಸಕ್ಕೆ ಒಂದು ಸ್ವಯಂಚಾಲಿತ ಇಮೇಲ್ ಮೂಲಕ ಅವರ **Application Id** ಮತ್ತು **Password** ಅನ್ನು ಕಳುಹಿಸಲಾಗುವುದು. ಅಭ್ಯರ್ಥಿಯು **Edit Application** ಗುಂಡಿಯನ್ನು ಒತ್ತಿ, ಅವರ **Application Id** ಮತ್ತು **Password** ಅನ್ನು ಬಳಸಿ ತಮ್ಮ ವಿವರಗಳನ್ನು ಅಪ್‌ಲೋಡ್ ಮಾಡಬಹುದು ಅಥವಾ ಅಪ್‌ಲೋಡ್ ಮಾಡಿದ ಮಾಹಿತಿಯನ್ನು ಬದಲಾಯಿಸಬಹುದು. ಅಭ್ಯರ್ಥಿಗಳು ತಾನು ಅಪ್‌ಲೋಡ್ ಮಾಡಿದ ಎಲ್ಲಾ ಮಾಹಿತಿಗಳನ್ನು ಖಚಿತಪಡಿಸಿಕೊಂಡ ನಂತರವೇ **Next** ಗುಂಡಿಯನ್ನು ಒತ್ತುವುದು.

**ಹಂತ–4:**ನೀವು ಸಹಿಯೊಂದಿಗಿನ ಸ್ಕ್ಯಾನ್ ಮಾಡಿದ ಪಾಸ್ ಪೋರ್ಟ್ ಗಾತ್ರದ ಭಾವಚಿತ್ರವನ್ನು ಆಯ್ಕೆ ಮಾಡುವ ಬಗ್ಗೆ **Browse** ಗುಂಡಿಯನ್ನು ಒತ್ತಿ ಮತ್ತು ನಿಮ್ಮ ಸಹಿಯೊಂದಿಗಿನ ಭಾವಚಿತ್ರವನ್ನು ಪೂರ್ವದರ್ಶನ ಮಾಡಲು **Submit** ಗುಂಡಿಯನ್ನು ಒತ್ತಿ. ಒಂದು ವೇಳೆ ತಪ್ಪಾದ ಭಾವಚಿತ್ರವನ್ನು ಅಪ್‌ಲೋಡ್ ಮಾಡಿದ್ದಲ್ಲಿ ಮೇಲಿನ ಕ್ರಮವನ್ನು ಪುನರಾವರ್ತಿಸಿ ಅಥವಾ ಮುಂದಿನ ಪುಟದ ಬಗ್ಗೆ **Next** ಗುಂಡಿಯನ್ನು ಒತ್ತಿ. ಅಭ್ಯರ್ಥಿಯು ಈ ಹಂತದಲ್ಲಿ **Next** ಗುಂಡಿಯನ್ನು ಒತ್ತಿದರೆ ತಮ್ಮ ಅರ್ಜಿಯಲ್ಲಿನ ಯಾವುದೇ ವಿವರವನ್ನು ಬದಲಾಯಿಸಲು ಸಾಧ್ಯವಿರುವುದಿಲ್ಲ.

ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಅಭ್ಯರ್ಥಿಯು ತನ್ನ ಇತ್ತೀಚಿನ ಭಾವಚಿತ್ರವನ್ನು ಖಾಲಿ ಬಿಳಿ ಕಾಗದದ ಮೇಲೆ ಇರಿಸಿ, ಕಪ್ಪು ನಕ್ಷೆ/ಮಾರ್ಕರ್ ಪೆನ್ನಿನಿಂದ ಸರಿಯಾಗಿ ಭಾವಚಿತ್ರದ ಕೆಳಗೆ ಸಹಿ ಮಾಡಿರುವುದನ್ನು ಮತ್ತು ಅಂಕಣದೊಳಗೆ ಇರುವುದನ್ನು ಖಚಿತಪಡಿಸಿಕೊಳ್ಳಿ. ಯಾವುದೇ ಕಾರಣಕ್ಕೂ ಭಾವ ಚಿತ್ರದ ಮೇಲೆ ಸಹಿ ಮಾಡಬಾರದು.

| ಕಡತ ಗಾತ್ರ<100ಕೆ.ಬಿ | <u>ಪಾಸ್ ಪೋರ್ಟ್ ಭಾವಚಿತ್ರ ಮತ್ತು ಸಹಿ ಅಳತೆ</u> |
|---|---|
| ಡಿಪಿಐ ಸೆಟ್ಟಿಂಗ್ =100 ಡಿಪಿಐ |  |
| ಆಕೃತಿ ಪ್ರಮಾಣ =100% | |
| ಬಣ್ಣ | |
| ಜೆ ಪಿ ಜಿ/ ಜೆ ಪಿ ಇ ಜಿ | |

**ಪಾಸ್‌ಪೋರ್ಟ್ ಭಾವಚಿತ್ರದ ಅಳತೆಗಳು:** 45 ಎಂ.ಎಂ.(ಉದ್ದ) **X** 35 ಎಂ.ಎಂ. (ಅಗಲ)

**ಸಹಿ ಅಳತೆ:** 20 ಎಂ.ಎಂ. (ಉದ್ದ) **X** 35 ಎಂ.ಎಂ. (ಅಗಲ)

**Note**:ಅಭ್ಯರ್ಥಿಯು Photo Upload ಗುಂಡಿಯನ್ನು ಒತ್ತಿ, ಅವರ Application Id ಮತ್ತು Password ಅನ್ನು ಬಳಸಿ ತಮ್ಮ ಸಹಿಯೊಂದಿಗಿನ ಭಾವಚಿತ್ರವನ್ನು ಅಪ್‌ಲೋಡ್ ಮಾಡಬಹುದು ಅಥವಾ ತಪ್ಪಾದಲ್ಲಿ ಅದನ್ನು ಬದಲಾಯಿಸಬಹುದು. ಒಂದು ವೇಳೆ ಅಭ್ಯರ್ಥಿಯು ತಮ್ಮ ಭಾವಚಿತ್ರ ಮತ್ತು ಸಹಿಯನ್ನು ಅಪ್‌ಲೋಡ್ ಮಾಡದಿದ್ದರೆ ಅವರ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

**ಹಂತ 5:**ನಂತರ ಅರ್ಜಿ ಶುಲ್ಕ ಮತ್ತು ಅನ್ವಯಿಸುವ ಸೇವಾ ಶುಲ್ಕವನ್ನು Payment Gateway ಲಿಂಕ್ ಬಳಸಿ ಪಾವತಿಸತಕ್ಕದ್ದು

**ಹಂತ 6:**ಅರ್ಜಿಯ ಮುದ್ರಣವನ್ನು ಪಡೆಯಲು Print Application ಗುಂಡಿಯನ್ನು ಒತ್ತಿ, ಅನಂತರವೇ Application Preview ಮೂಡಲಿದ್ದು, ಅಭ್ಯರ್ಥಿಗಳು ಅರ್ಜಿಯ ಪ್ರತಿಯನ್ನು ಕಡ್ಡಾಯವಾಗಿ Download ಮಾಡಿಕೊಳ್ಳತಕ್ಕದ್ದು. Mandya DCC Bank ಅಪೇಕ್ಷಿಸಿದಾಗ ಈ ಪ್ರತಿಯನ್ನು ಹಾಜರುಪಡಿಸಬೇಕು.

**Note:**

1. ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಸಲ್ಲಿಸುವ ಅರ್ಜಿಗಳಲ್ಲಿ ಅಪೂರ್ಣ/ ಅಸ್ಪಷ್ಟ ದಾಖಲೆಗಳನ್ನು ಅಥವಾ ಮಾಹಿತಿಗಳನ್ನು ಸಲ್ಲಿಸಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
2. ಶುಲ್ಕವನ್ನು ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕ:16-02-2024ರ ನಂತರ ಶುಲ್ಕವನ್ನು ಸಂದಾಯ ಮಾಡಲು ಅವಕಾಶವಿರುವುದಿಲ್ಲ. ಡಿ.ಡಿ., ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಸಂದಾಯ ಮಾಡದ ಅರ್ಜಿಗಳನ್ನು ಪರಿಗಣಿಸುವುದಿಲ್ಲ.
3. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗಧಿ ಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು, ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ಇತರೆ ಯಾವುದೇ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ.
4. ಬ್ಯಾಂಕು ಅರ್ಜಿ ಸಲ್ಲಿಸಲು ನಿಗಧಿ ಪಡಿಸಿದ ಕೊನೆಯ ದಿನಾಂಕದ ನಂತರ ಅರ್ಜಿಗಳನ್ನು ಪರಿಶೀಲಿಸಿ ಬ್ಯಾಂಕಿನ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಅಭ್ಯರ್ಥಿಗಳು ತಮ್ಮ ಅರ್ಜಿಯ ಸ್ಥಿತಿಯನ್ನು ತಿಳಿಯಬೇಕಾದಲ್ಲಿ ಬ್ಯಾಂಕಿನ ವೆಬ್‌ಸೈಟ್ **www.mandyadccbank.com** ಅನ್ನು ತೆರೆದು ಪರದೆಯ ಮೇಲೆ **'Mandya DCC Bank Recruitment 2024'** ನಲ್ಲಿ Application Id ಮತ್ತು Password ಅನ್ನು ದಾಖಲಿಸಿ, ಅರ್ಜಿ ಸಿಂಧುವಾಗಿರುವುದಕ್ಕೆ ಮಾಹಿತಿಯನ್ನು ಪಡೆಯಬಹುದಾಗಿರುತ್ತದೆ. ನಿಮ್ಮ ಅರ್ಜಿಯ ಮಾಹಿತಿ ಬ್ಯಾಂಕಿನ ವೆಬ್‌ಸೈಟ್‌ನಲ್ಲಿ ದೊರೆಯದಿದ್ದಲ್ಲಿ, ನೀವು ಪಾವತಿಸಿದ ಶುಲ್ಕದ ವಿವರವುಳ್ಳ ಪ್ರತಿಯೊಂದಿಗೆ ಮಂಡ್ಯ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ., ಪ್ರಧಾನ ಕಛೇರಿ, ಮಾರ್ಕೆಟ್ ರಸ್ತೆ, ಮಂಡ್ಯ-571 401 ಇಲ್ಲಿ ಸಂಪರ್ಕಿಸಬಹುದು.

**ವಿಶೇಷ ಸೂಚನೆ:**ONLINE ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ತಾಂತ್ರಿಕ ತೊಂದರೆ ಅಥವಾ ಸಮಸ್ಯೆ ಎದುರಾದಲ್ಲಿ ಸಹಾಯವಾಣಿ **(Help Line) 9108538218** ಅನ್ನು ಬೆಳಗ್ಗೆ 10.00 ಗಂಟೆಯಿಂದ ಸಂಜೆ 6.00 ಗಂಟೆಯವರೆಗೆ ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದು.

**6) ಆಯ್ಕೆ ವಿಧಾನ:**

ಕರ್ನಾಟಕ ಸಹಕಾರ ಸಂಘಗಳ ನಿಯಮ 1960 ನಿಯಮ ಸಂಖ್ಯೆ:18 ರನ್ವಯ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು.

**B) <u>ಹುದ್ದೆಯ ಹೆಸರು:</u> "ಮಧ್ಯಮ ಆಡಳಿತ ವೃಂದ"–ಮಾಹಿತಿ ತಂತ್ರಜ್ಞಾನ ಮುಖ್ಯ ವ್ಯವಸ್ಥಾಪಕರು, ಗ್ರೇಡ್-I (Information Technology Chief Manager. Grade-I)ಹುದ್ದೆ;–**

**ಲಿಖಿತ ಪರೀಕ್ಷೆಗೆ ನಿಗದಿ ಪಡಿಸಿರುವ ಒಟ್ಟು ಅಂಕಗಳು:200**

| ಕ್ರ.ಸಂ | ವಿಷಯ | ಅಂಕಗಳು |
|---|---|---|
| 1 | ಕನ್ನಡ ಭಾಷೆ | 50 |
| 2 | ಸಾಮಾನ್ಯ ಇಂಗ್ಲೀಷ್ | 25 |
| 3 | ಸಾಮಾನ್ಯ ಜ್ಞಾನ | 25 |
| 4 | ಕಂಪ್ಯೂಟರ್ ಪರೀಕ್ಷೆ | 100 |
| | **ಒಟ್ಟು ಅಂಕಗಳು** | **200** |

– ಈ ರೀತಿ ಲಿಖಿತ ಪರೀಕ್ಷೆಯಲ್ಲಿ, ತಾಂತ್ರಿಕ ಪರೀಕ್ಷೆಯಲ್ಲಿ ಪಡೆಯಲಾದ ಅಂಕಗಳ ಶೇಕಡವಾರು ಆಧಾರದ ಮೇಲೆ 1:5 ರ ಅನುಪಾತದಲ್ಲಿ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು. ಲಿಖಿತ ಪರೀಕ್ಷೆಯಲ್ಲಿ ಪಡೆಯಲಾದ ಅಂಕಗಳನ್ನು ಶೇ.85ಕ್ಕೆ ಇಳಿಸಿ ಉಳಿದ ಪ್ರತಿಶತ 15 ಅಂಕಗಳನ್ನು ಸಂದರ್ಶನಕ್ಕೆ ನೀಡಲಾಗುವುದು.

ಲಿಖಿತ ಪರೀಕ್ಷೆಯನ್ನು ಕರ್ನಾಟಕ ರಾಜ್ಯ ಸಹಕಾರ ಸಂಘಗಳ ನಿಬಂಧಕರು, ಬೆಂಗಳೂರು ರವರ ದಿ:16-09-2020ರ ಸುತ್ತೋಲೆಯನ್ವಯ ಬಾಹ್ಯ ಮೂಲ ಸಂಸ್ಥೆಗಳಿಂದ ಲಿಖಿತ/ತಾಂತ್ರಿಕ ಪರೀಕ್ಷೆ ನಡೆಸಲಾಗುವುದು. ಲಿಖಿತ ಪರೀಕ್ಷೆ/ ತಾಂತ್ರಿಕ ಪರೀಕ್ಷೆ/ ಅರ್ಹತೆಯುಳ್ಳ ಪರೀಕ್ಷೆಗಳಲ್ಲಿ ಪಡೆಯಲಾದ ಅಂಕಗಳನ್ನು ಶೇ. 85ಕ್ಕೆ ಇಳಿಸಲಾಗುವುದು ಮತ್ತು ಈ ರೀತಿ ಕಡಿತ ಮಾಡಲಾದ ನಂತರ ಪಡೆಯಲಾದ ಅಂಕಗಳು ಮತ್ತು

ಸಂದರ್ಶನದಲ್ಲಿ ಪಡೆಯಲಾದ ಅಂಕಗಳನ್ನು ಒಟ್ಟುಗೂಡಿಸಲಾಗುವುದು. ಒಟ್ಟು ಪಡೆಯಲಾದ ಅಂಕಗಳ ಮೆರಿಟ್ ಆಧಾರದ ಮೇಲೆ ಕರ್ನಾಟಕ ಸರ್ಕಾರದ ಮೀಸಲಾತಿ ನಿಯಮಗಳನ್ನು ಅನುಸರಿಸಿ ಆಯ್ಕೆ ಪಟ್ಟಿ ಸಿದ್ಧಪಡಿಸಿ ನೇಮಕಾತಿ ಮಾಡಿಕೊಳ್ಳಲಾಗುವುದು.

THE MANDYA DIST. CO-OP. CENTRAL BANK LTD. A.R.M.D. No.268 Estd.1953 MANDYA

- **ಲಿಖಿತ ಪರೀಕ್ಷೆ ಹಾಗೂ ಸಂದರ್ಶನಕ್ಕೆ ಹಾಜರಾಗುವ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.**
- **ಲಿಖಿತ ಪರೀಕ್ಷೆ ನಡೆಯುವ ಸ್ಥಳ, ದಿನಾಂಕ ಮತ್ತು ವೇಳೆ ಇವುಗಳ ವಿವರವನ್ನು ಪ್ರತ್ಯೇಕವಾಗಿ ಅರ್ಹ ಅಭ್ಯರ್ಥಿಗಳಿಗೆ ಅಂಚೆ ಮೂಲಕ/ ನೊಂದಾಯಿತ ಇ-ಮೇಲ್ ಮೂಲಕ ಹಾಗೂ ಬ್ಯಾಂಕಿನ ವೆಬ್‌ಸೈಟ್ ಮೂಲಕ ತಿಳಿಸಲಾಗುವುದು. ಸದರಿ ಮಾಹಿತಿಯನ್ನು ಬ್ಯಾಂಕಿನ ವೆಬ್‌ಸೈಟ್ ಮೂಲಕ ತಿಳಿದುಕೊಳ್ಳುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ.**

**7) ಅರ್ಹತಾ ಷರತ್ತುಗಳು:**

- ಭಾರತೀಯ ನಾಗರೀಕನಾಗಿರತಕ್ಕದ್ದು.
- ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.
- ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಬ್ಯಾಂಕು ಕಾಯ್ದಿರಿಸಿಕೊಂಡಿದೆ.

ನಿಗಧಿತ ಶೈಕ್ಷಣಿಕ ವಿದ್ಯಾರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

**8) ನೇಮಕಾತಿಗೆ ಅನರ್ಹತೆಗಳು:**

**ಯಾವುದೇ ವ್ಯಕ್ತಿಯು;**

1. ಭಾರತದ ಪ್ರಜೆಯಲ್ಲದಿದ್ದರೆ.
2. 1872 ಭಾರತೀಯ ಕರಾರು ಕಾಯಿದೆಯ ಪ್ರಕಾರ ಕರಾರು ಮಾಡಿಕೊಳ್ಳಲು ಅನರ್ಹನಾಗಿದ್ದರೆ.
3. ನ್ಯಾಯಾಲಯದಲ್ಲಿ ಕ್ರಿಮಿನಲ್ ಅಪರಾಧಗಳಿಗೆ ಶಿಕ್ಷೆ ಹೊಂದಿದ್ದರೆ.
4. ಭಾರತ ಸರ್ಕಾರದ ಅಥವಾ ರಾಜ್ಯ ಸರ್ಕಾರದ ಅಥವಾ ಶಾಸನಬದ್ಧ ನಿಗಮದ ಅಥವಾ ರಾಜ್ಯ ಅಥವಾ ಕೇಂದ್ರ ಸರ್ಕಾರದ ಸ್ವಾಮಿತ್ವದ ಸಾರ್ವಜನಿಕ ಉದ್ಯಮಗಳ ಅಥವಾ ವಾಣಿಜ್ಯ/ ಸಹಕಾರ ಉದ್ಯಮಗಳ ಅಥವಾ ಸ್ಥಳೀಯ ಸಂಸ್ಥೆಗಳ ಅಥವಾ ಸಹಕಾರ ಸಂಘಗಳ ಅಥವಾ ಬೇರಾವುದೇ ಸಂಸ್ಥೆಯ ನೌಕರನಾಗಿದ್ದು, ಅವುಗಳ ಸೇವೆಯಿಂದ ವಜಾ ಮಾಡಲ್ಪಟ್ಟಿದ್ದರೆ.
5. ಸಕ್ಷಮ ನ್ಯಾಯಾಲಯದಿಂದ ದಿವಾಳಿಯೆಂದು ಘೋಷಿಸಲ್ಪಟ್ಟ ವ್ಯಕ್ತಿ ಅಥವಾ ಅನನ್ಮುಕ್ತ ದಿವಾಳಿ ಆಗಿದ್ದರೆ.
6. ಮಾನಸಿಕ ಅಸ್ವಸ್ಥತೆ/ ಖಿನ್ನತೆಗೆ ಒಳಗಾಗಿದ್ದರೆ.
7. ಕಾನೂನುಬಾಹಿರ ನಿಕಾಯ (Unlawful body) ಅಥವಾ ಸಂಸ್ಥೆಯೊಂದಿಗೆ ಯಾವುದೇ ರೀತಿಯ ಸಂಪರ್ಕ ಹೊಂದಿದ್ದರೆ ಅಥವಾ ಸದಸ್ಯನಾಗಿದ್ದರೆ ಅಥವಾ ಅಂತಹ ಸಂಸ್ಥೆ/ ನಿಕಾಯದ ಯಾವುದೇ ಚಟುವಟಿಕೆಯಲ್ಲಿ ಅಥವಾ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರೆ ಅಥವಾ ಸಂಪರ್ಕ ಹೊಂದಿದ್ದರೆ.
8. ಭಾರತ ಸಂವಿಧಾನ ಮೌಲ್ಯಗಳ ಸರ್ವೋಚ್ಛತೆಗೆ ಬದ್ಧನಾಗಿರದೆ ಸಂವಿಧಾನವನ್ನು ಬುಡಮೇಲು ಮಾಡುವ ಗುರಿ ಹೊಂದಿದ್ದರೆ.
9. ಭಾರತದ ಸಾರ್ವಭೌಮತ್ವ ಮತ್ತು ಅಖಂಡತೆ, ದೇಶದ ಭದ್ರತೆ, ರಾಜ್ಯದ ಭದ್ರತೆ, ಸಾರ್ವಜನಿಕ ಸುವ್ಯವಸ್ಥೆಗೆ ಧಕ್ಕೆ ತರುವಂತಹ/ ಭಂಗ ಮಾಡುವಂತಹ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದ್ದರೆ.
10. ಕೇಂದ್ರ ಅಥವಾ ಯಾವುದೇ ರಾಜ್ಯದ ಲೋಕಸೇವಾ ಆಯೋಗ ಅಥವಾ ಸ್ವಾಯತ್ತ/ನೇಮಕಾತಿ ಸಮಿತಿಗಳು ನಡೆಸುವ ಆಯ್ಕೆ ಅಥವಾ ಪರೀಕ್ಷೆಯಲ್ಲಿ ಪಾಲ್ಗೊಳ್ಳಲು ಖಾಯಂ ಆಗಿ ಬಹಿಷ್ಕೃತನಾಗಿದ್ದರೆ ಅಥವಾ ಅನರ್ಹತೆ ಹೊಂದಿದ್ದರೆ.
11. ನೈತಿಕ ಅಧಃಪತನವನ್ನು ಒಳಗೊಂಡ ಯಾವುದೇ ಅಪರಾಧಕ್ಕಾಗಿ ಅಪರಾಧಿಯೆಂದು ಸಿದ್ಧದೋಷಿಯಾಗಿದ್ದರೆ ಅಥವಾ ನಿರ್ಣೀತವಾಗಿದ್ದರೆ.
12. ವೈದ್ಯಕೀಯವಾಗಿ ಅನರ್ಹನೆಂದು ಪರಿಗಣಿಸಲಾಗಿದ್ದರೆ/ ಪರಿಗಣಿಸಲಾದರೆ.

13. ಯಾವುದೇ ಅಭ್ಯರ್ಥಿಯು ಬ್ಯಾಂಕ್ ಸೇವೆಗೆ ಅರ್ಜಿ ಸಲ್ಲಿಸಲು ಮತ್ತು ನೇಮಕಾತಿ ಪಡೆಯಲು ಹಾಗೂ ಸೇವೆಯಲ್ಲಿ ಮುಂದುವರೆಯಲು, ಮೇಲಿನ ಅನರ್ಹತೆಗಳನ್ನು ಹೊಂದಿರತಕ್ಕದ್ದಲ್ಲ. ಈ ನಿಬಂಧನೆಗಳಲ್ಲಿ ಉಕ್ತವಾದ ಯಾವುದೇ ಅನರ್ಹತೆಗೆ ಒಳಗಾಗಿರುವುದು ಕಂಡುಬಂದಲ್ಲಿ/ ಸಾಬೀತಾದಲ್ಲಿ ಅಂಥ ವ್ಯಕ್ತಿಯನ್ನು ತಕ್ಷಣದಿಂದ ಬ್ಯಾಂಕ್ ಸೇವೆಯಿಂದ ತೆಗೆದುಹಾಕಲಾಗುವುದು ಮತ್ತು ಆ ಬಗ್ಗೆ ಕ್ರಿಮಿನಲ್ ಕ್ರಮ ಕೈಗೊಳ್ಳಲು ಅವಕಾಶವಿರುತ್ತದೆ.

**9) ಜಾತಿ/ಮೀಸಲಾತಿ ಪ್ರಮಾಣ ಪತ್ರಗಳು:**

ಮೀಸಲಾತಿ ಬಯಸುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು:-

**ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು: ನಮೂನೆ 'ಡಿ'**

**ಆ) ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳು: ನಮೂನೆ 'ಇ'**

**ಇ) ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು: ನಮೂನೆ 'ಎಫ್'**

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಿತ ತಹಸೀಲ್ದಾರ್‌ರವರಿಂದ ಅಂದರೆ ತಹಶೀಲ್ದಾರ್‌ರವರ ಸಹಿ ಮತ್ತು ಮೊಹರು ಅಥವಾ ಬಾರ್ ಕೋಡ್, ಹಾಲೋಗ್ರಾಮ್ ಮತ್ತು ವಾಟರ್ ಮಾರ್ಕ್‌ನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಕ್ಕೆ ಮತ್ತು ಪ್ರವರ್ಗ-1ರ ಮೀಸಲಾತಿ ಪ್ರಮಾಣ ಪತ್ರಗಳು ರದ್ದಾಗುವವರೆಗೂ ಚಾಲ್ತಿಯಲ್ಲಿರುವುದರಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ನಿಗದಿಪಡಿಸಿದ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು, ಹಿಂದುಳಿದ ವರ್ಗಗಳ ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ವರ್ಗದ ಮೀಸಲಾತಿ ಪ್ರಮಾಣ ಪತ್ರಗಳು ಐದು ವರ್ಷ ಚಾಲ್ತಿಯಲ್ಲಿರುತ್ತವೆ. ಅಭ್ಯರ್ಥಿಗಳು ಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು. ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ವಯೋಮಿತಿ ವಿನಾಯಿತಿಯನ್ನು ರದ್ದುಪಡಿಸಲಾಗುವುದು. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ. ಈ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.

**10) ಮಾಜಿ ಸೈನಿಕರು ಅಥವಾ ಮಾಜಿ ಸೈನಿಕರ ಕುಟುಂಬದ ಅಭ್ಯರ್ಥಿ:**

ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 02 ಸೆಹಿಮ 2023 ಬೆಂಗಳೂರು, ದಿನಾಂಕ:08-03-2023 ರನ್ವಯ ನೇರ ನೇಮಕಾತಿಗಳಲ್ಲಿ ಶೇಕಡ 10 ರಷ್ಟು ಹುದ್ದೆಗಳನ್ನು ಮಾಜಿ ಸೈನಿಕರಿಗೆ ಮೀಸಲಾತಿ ಕಲ್ಪಿಸಲಾಗಿದೆ. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರಲ್ಲಿದ್ದಂತೆ ಮಾಜಿ ಸೈನಿಕರ ವಿವರಣೆ ಕೆಳಕಂಡಂತಿದೆ:

1. ಮಾಜಿ ಸೈನಿಕ ಎಂದರೆ ಕೇಂದ್ರ ಸಶಸ್ತ್ರ ದಳಗಳಾದ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಲ್ಲದ) ಸೇವೆ ಸಲ್ಲಿಸಿದ ವ್ಯಕ್ತಿ. ಆದರೆ ಡಿಫೆನ್ಸ್ ಸೆಕ್ಯೂರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇವೆ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ. **ಮತ್ತು**
2. ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.

ಅ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ **ಅಥವಾ**

ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಿಂದ ಬಿಡುಗಡೆಯಾದವನು **ಅಥವಾ**

ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ. **ಅಥವಾ**

THE MANDYA DIST. CO-OP. CENTRAL BANK LTD. A.R.M.D. No.268 Estd.1953 MANDYA

ಈ) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು:-

i. ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.

ii. ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.

iii. ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.

ವಿವರಣೆ:ಕೇಂದ್ರ ಸಶಸ್ತ್ರ ದಳದಲ್ಲಿ ಸೇವೆಯಲ್ಲಿರುವ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ನಿರ್ದಿಷ್ಟ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಪುನರ್ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ಬ್ಯಾಂಕಿನ ಹುದ್ದೆಗೆ ನೇಮಕ ಹೊಂದುವಂತಿಲ್ಲ. ಇಂತಹವರು ಅರ್ಜಿ ಸಲ್ಲಿಸುವ ಮುನ್ನ ಸೇನೆಯಿಂದ ನಿರಾಕ್ಷೇಪಣಾ ಪತ್ರ ಪಡೆದು ಸಲ್ಲಿಸಬೇಕು. ಸೇನೆಯಿಂದ ಬಿಡುಗಡೆಯಾದ ವ್ಯಕ್ತಿಗಳು ಅವರ ಬಿಡುಗಡೆ ಪ್ರಮಾಣ ಪತ್ರವನ್ನು ಸಲ್ಲಿಸಬೇಕು. ಮಾಜಿ ಸೈನಿಕರ ಅವಲಂಬಿತರು, ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಕೊಲ್ಲಲ್ಪಟ್ಟಿರುವ / ಶಾಶ್ವತವಾಗಿ ಅಂಗವಿಕಲರಾದ ಬಗ್ಗೆ ಪ್ರಮಾಣ ಪತ್ರವನ್ನು ಮೂಲ ದಾಖಲಾತಿ ಪರಿಶೀಲನೆಗೆ ತಪ್ಪದೆ ಹಾಜರುಪಡಿಸಬೇಕು.

**11) ಅಂಗವಿಕಲ ಅಭ್ಯರ್ಥಿ:**

ಸರ್ಕಾರವು ನೇರ ನೇಮಕಾತಿಗಳಿಗೆ ಅಂಗವಿಕಲ/ವಿಕಲ ಚೇತನರಿಗೆ ಸಮತಳ ಮೀಸಲಾತಿಯನ್ನು ಜಾರಿಗೊಳಿಸುವ ಸಂಬಂಧ ಸರ್ಕಾರವು ಆದೇಶ ಸಂಖ್ಯೆ ಸಿಆಸುಇ 02 ಸೆಹಿಮ 2023 ಬೆಂಗಳೂರು, ದಿನಾಂಕ:08-03-2023ರಲ್ಲಿ ಮೀಸಲಾತಿ ಕಲ್ಪಿಸಿದೆ. ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ: ಸಿಆಸುಇ 115 ಸೆನೆನಿ 2005 ದಿನಾಂಕ:19-11-2005 ರಲ್ಲಿ ನಿಗಧಿ ಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ:ಮಮಇ 65 ಪಿಹೆಚ್‌ಪಿ 2010, ದಿನಾಂಕ:18-02-2011 ರಂತೆ ಜಿಲ್ಲಾ ಮಟ್ಟದ ಸಕ್ಷಮ ವೈದ್ಯಕೀಯ ಪ್ರಾಧಿಕಾರ ಇವರಿಂದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗಧಿ ಪಡಿಸಿದ ಕೊನೆಯದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದಾಗ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ವಯೋಮಿತಿ ವಿನಾಯತಿಯನ್ನು ರದ್ದುಪಡಿಸಲಾಗುವುದು. **ಇತರೆ ಯಾವುದೇ ನಮೂನೆಯಲ್ಲಿ ಅಂಕವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು/ಗುರುತಿನ ಚೀಟಿಯ ಪ್ರತಿಗಳನ್ನು ಪರಿಗಣಿಸಲು ಬರುವುದಿಲ್ಲ. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆ ಕೊನೆಯಲ್ಲಿ ತೋರಿಸಲಾಗಿದೆ).**

**12) ಪ್ರಮುಖ ಸೂಚನೆಗಳು:**

ಅಭ್ಯರ್ಥಿಯ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಒಂದು ಹಾಳೆಯ ಮೇಲಿಟ್ಟು ಅದರ ಕೆಳಗೆ ಕಪ್ಪು ಶಾಹಿಯ ಸ್ಕೆಚ್/ ಮಾರ್ಕರ್ ಪೆನ್‌ಲ್ಲಿ ಸಹಿಯನ್ನು ಸ್ಕ್ಯಾನ್ ಮಾಡಿ ಅರ್ಜಿಗೆ UPLOAD ಮಾಡಬೇಕು. ಭಾವಚಿತ್ರ ಹಾಗೂ ಸಹಿಯನ್ನು UPLOAD ಮಾಡದ ಅರ್ಜಿಗಳು ತಿರಸ್ಕೃತಗೊಳ್ಳುತ್ತವೆ. ಈ ಕೆಳಕಂಡ ಪ್ರಮಾಣ ಪತ್ರಗಳನ್ನು ನಿಗದಿತ ನಮೂನೆಯಲ್ಲಿ ONLINE ಮೂಲಕ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಪ್ರಾಧಿಕಾರಗಳಿಂದ ಪಡೆದಿಟ್ಟುಕೊಂಡಿರಬೇಕು. (ವಿದ್ಯಾರ್ಹತೆಗೆ ಸಂಬಂಧಿಸಿದ ಪ್ರಮಾಣ ಪತ್ರ/ ತೇರ್ಗಡೆ ಪ್ರಮಾಣ ಪತ್ರ/ ಇತರೆ ಎಲ್ಲಾ ಪ್ರಮಾಣಪತ್ರಗಳನ್ನು UPLOAD ಮಾಡಬೇಕು) ಹಾಗೂ ಸಂದರ್ಶನಕ್ಕೆ /ಮೂಲ ದಾಖಲಾತಿಯ ಪರಿಶೀಲನೆಗೆ ಅರ್ಹರಾದಾಗ ಆ ಸಮಯದಲ್ಲಿ ಅದೇ ಪ್ರಮಾಣ ಪತ್ರದ ಹಾಗೂ ಇತರೇ ಎಲ್ಲಾ ಪ್ರಮಾಣ ಪತ್ರಗಳ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು. ಹಾಗೆಯೇ ಯಾವುದೇ ಪ್ರಮಾಣ ಪತ್ರಗಳನ್ನು ನಿಗದಿ ಪಡಿಸಿರುವ ನಮೂನೆಗಳಲ್ಲಿರದಿದ್ದಲ್ಲಿ ಮತ್ತು ತಪ್ಪಿದ್ದಲ್ಲಿ ಸದರಿ ವಯೋಮಿತಿ ವಿನಾಯಿತಿಯನ್ನು ತಿರಸ್ಕರಿಸಲಾಗುವುದು. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿರಬೇಕು. ನಂತರ ಪಡೆದ ಯಾವುದೇ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ

1) ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ ಎಲ್ಲಾ ವರ್ಷಗಳ/ಸೆಮಿಸ್ಟರ್‌ಗಳ ಅಂಕಪಟ್ಟಿಗಳು ಅಥವಾ ಘಟಿಕೋತ್ಸವದ ಪ್ರಮಾಣ ಪತ್ರ.

2) ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ /ಶಾಲೆಯ ವರ್ಗಾವಣೆ ಪ್ರಮಾಣ ಪತ್ರ / ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ.
3) ಸೈನಿಕ ಸೇವೆಯಿಂದ ಬಿಡುಗಡೆಯಾದ ಪ್ರಮಾಣ ಪತ್ರ ಮತ್ತು ಪಿಂಚಣಿ /ಗ್ರಾಚ್ಯುಟಿ ಪಡೆಯುತ್ತಿರುವ ಪ್ರಮಾಣ ಪತ್ರ/ ಮಾಜಿ ಸೈನಿಕ ಅವಲಂಬಿತರಾಗಿದ್ದಲ್ಲಿ, ಮಾಜಿ ಸೈನಿಕರು ಸೇವೆಯಲ್ಲಿರುವಾಗ ಮೃತಪಟ್ಟಿದ್ದಲ್ಲಿ ಅಥವಾ ಖಾಯಂ ಆಗಿ ಗಾಯಗೊಂಡಿರುವ ಪ್ರಮಾಣ ಪತ್ರ (ಮಾಜಿ ಸೈನಿಕ ವಯೋಮಿತಿ ವಿನಾಯಿತಿ ಕೋರಿದ್ದಲ್ಲಿ)
4) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ ಮತ್ತು ಪ್ರವರ್ಗ–3ಬಿ ಮೀಸಲಾತಿ ಪ್ರಮಾಣ ಪತ್ರಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಮೂನೆಗಳಲ್ಲಿ (ವಯೋಮಿತಿ ವಿನಾಯಿತಿ ಕೋರಿದ್ದಲ್ಲಿ)
5) ಅಂಗವಿಕಲ ಪ್ರಮಾಣ ಪತ್ರ (ವಯೋಮಿತಿ ವಿನಾಯಿತಿ ಕೋರಿದ್ದಲ್ಲಿ)
6) ನಿಗಧಿಪಡಿಸಿದ ವಿದ್ಯಾರ್ಹತೆಯ ಅಂಕಪಟ್ಟಿ ಮತ್ತು ಇತರೆ ಎಲ್ಲಾ ಅರ್ಹತಾ ದಾಖಲಾತಿಗಳ ಮೂಲ ಪ್ರಮಾಣ ಪತ್ರಗಳನ್ನು ಅಥವಾ ಸ್ವಯಂ ಧೃಢೀಕರಿಸಿದ ಮೂಲ ದಾಖಲಾತಿಗಳ ಜೆರಾಕ್ಸ್ ಪ್ರತಿಗಳನ್ನು UPLOAD ಮಾಡುವುದು ಮತ್ತು ಸಂದರ್ಶನ/ಪರಿಶೀಲನೆ ವೇಳೆಯಲ್ಲಿ ಹಾಜರುಪಡಿಸತಕ್ಕದ್ದು.
7) ಜನ್ಮ ದಿನಾಂಕದ ದೃಢೀಕರಣಕ್ಕಾಗಿ ಎಸ್ಎಸ್ಎಲ್ಸಿ ಅಂಕಪಟ್ಟಿ ಅಥವಾ ಕ್ಯುಮ್ಯುಲೇಟಿವ್ ರೆಕಾರ್ಡ್‌ನ ಮೂಲ ದಾಖಲಾತಿಗಳನ್ನು ಸಂದರ್ಶನ/ಪರಿಶೀಲನೆ ವೇಳೆಯಲ್ಲಿ ಹಾಜರುಪಡಿಸತಕ್ಕದ್ದು.
8) ಪ್ರಮಾಣ ಪತ್ರ ಇತ್ಯಾದಿಗಳ ಬಗ್ಗೆ ಅಭ್ಯರ್ಥಿಯು ಖಾತ್ರಿಪಡಿಸಿಕೊಂಡು ಅರ್ಜಿ ಸಲ್ಲಿಸುವುದು ಅವರ ವೈಯಕ್ತಿಕ ಜವಾಬ್ದಾರಿಯಾಗಿರುತ್ತದೆ.
9) ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆ ಪಟ್ಟಿಯಲ್ಲಿ ಸೇರ್ಪಡೆಯಾಗಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಹಕ್ಕು ದೊರೆಯುವುದಿಲ್ಲ.
10) ಯಾವುದೇ ಸಂದರ್ಭದಲ್ಲಿ, ಯಾವುದೇ ಕಾರಣವನ್ನು ನೀಡದೆ ನೇಮಕಾತಿ ಪ್ರಕ್ರಿಯೆಯನ್ನು ರದ್ದುಗೊಳಿಸುವ, ತಡೆಹಿಡಿಯುವ, ಬದಲಾಯಿಸುವ ಅಧಿಕಾರವನ್ನು ಬ್ಯಾಂಕಿನ ಆಡಳಿತ ಮಂಡಳಿ ಹೊಂದಿರುತ್ತದೆ.
11) ಆಯ್ಕೆಗೊಂಡ ಅಭ್ಯರ್ಥಿಗಳು ಎರಡು ವರ್ಷ ಅವಧಿಯ ಪರೀಕ್ಷಾರ್ಥ ಸೇವೆಯಲ್ಲಿರಬೇಕಾಗುತ್ತದೆ. ಪರೀಕ್ಷಾರ್ಥ ಅವಧಿಯಲ್ಲಿ ಸೇವೆಯು ತೃಪ್ತಿಕರವೆಂದು ಕಂಡು ಬಂದಲ್ಲಿ ಪರೀಕ್ಷಾವಧಿಯನ್ನು ಘೋಷಿಸಿ ಖಾಯಂಗೊಳಿಸಲಾಗುವುದು. ಸೇವೆಯು ತೃಪ್ತಿಕರವಾಗದಿದ್ದಲ್ಲಿ ಅಂತಹವರನ್ನು ಸೇವೆಯಿಂದ ವಜಾಗೊಳಿಸುವ ಅಧಿಕಾರವನ್ನು ಬ್ಯಾಂಕ್ ಕಾಯ್ದಿರಿಸಿಕೊಳ್ಳಲಾಗಿದೆ.
12) ಆಯ್ಕೆಗೊಂಡ ಅಭ್ಯರ್ಥಿಗಳು ಬ್ಯಾಂಕಿನಿಂದ ಸೂಚಿಸಲ್ಪಟ್ಟಂತೆ ಠೇವಣಿ ಹಾಗೂ ವೈಯಕ್ತಿಕ ಭದ್ರತೆ ನೀಡಬೇಕಾಗುತ್ತದೆ.
13) ಅಭ್ಯರ್ಥಿಗಳಿಗೆ ಕನ್ನಡ ಭಾಷೆ ಮತ್ತು ಪರಿಜ್ಞಾನ ಅತ್ಯಾವಶ್ಯಕವಾಗಿರುತ್ತದೆ.
14) ಸರ್ಕಾರಿ/ ಸಹಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಕೊನೆಯ ದಿನಾಂಕದೊಳಗೆ ಅವರ ನೇಮಕಾತಿ ಪ್ರಾಧಿಕಾರದ ಸಹಿ ಹಾಗೂ ಮೊಹರಿನೊಂದಿಗೆ ಪಡೆಯಲಾದ ನಿರಾಕ್ಷೇಪಣಾ ಪ್ರಮಾಣ ಪತ್ರ (ಕ್ರೂಢೀಕೃತ/ ಆನ್‌ಲೈನ್ ಮುಖಾಂತರ ಪಡೆದಿರುವ ನಿರಾಕ್ಷೇಪಣಾ ಪ್ರಮಾಣ ಪತ್ರಗಳು ಇದ್ದಲ್ಲಿ, ಅಂತಹ ನಿರಾಕ್ಷೇಪಣಾ ಪತ್ರಗಳನ್ನು ನೇಮಕಾತಿ ಪ್ರಾಧಿಕಾರದಿಂದ ಧೃಢಿಕರಿಸಿರಬೇಕು/ ಅಟೆಸ್ಟೆಡ್)
15) ಭರ್ತಿ ಮಾಡಬೇಕಾಗಿರುವ ಮೇಲಿನ ಹುದ್ದೆಯನ್ನು ಕರ್ನಾಟಕ ಸರ್ಕಾರದ ಮೀಸಲಾತಿ ಆದೇಶದ ರೀತ್ಯಾ ಮೀಸಲಾತಿ ನೀಡಿ ನೇಮಕಾತಿ ಮಾಡಲಾಗುವುದು.
16) ಅರ್ಜಿಯಲ್ಲಿ ನಮೂದಿಸಿದ ಅಂಕಪಟ್ಟಿ/ ಇತರೆ ದಾಖಲಾತಿಗಳಲ್ಲಿ ಯಾವುದೇ ವ್ಯತ್ಯಾಸ ಕಂಡುಬಂದಲ್ಲಿ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ. ಅಭ್ಯರ್ಥಿಗಳು ಆಯ್ಕೆಯಾದ ನಂತರ ಸಲ್ಲಿಸಿರುವ ವಿದ್ಯಾರ್ಹತೆ /ಮೀಸಲಾತಿ ದಾಖಲಾತಿಗಳ ನೈಜತೆಯ ಬಗ್ಗೆ ಖಾತರಿ ಪಡಿಸಿಕೊಳ್ಳಲು ಸಂಬಂಧಪಟ್ಟ ವಿಶ್ವವಿದ್ಯಾನಿಲಯಗಳಿಂದ ಧೃಢೀಕರಿಸುವ ಹಕ್ಕನ್ನು ಬ್ಯಾಂಕು ಕಾಯ್ದಿರಿಸಿಕೊಂಡಿದೆ. ಸಲ್ಲಿಸಿರುವ ದಾಖಲಾತಿಗಳು ಸುಳ್ಳು/ ನಕಲು/ ಖೋಟಾ ಎಂದು ಕಂಡುಬಂದಲ್ಲಿ ಯಾವುದೇ ಕಾರಣ ನೀಡದೇ, ಯಾವುದೇ ಹಂತದಲ್ಲಿ ನೇಮಕಾತಿಯನ್ನು ವಜಾಗೊಳಿಸಲಾಗುವುದು.

ಮೇಲ್ಕಂಡ ಸೂಚನೆಗಳನ್ನು ಪಾಲಿಸದೇ ಇರುವ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

THE MANDYA DIST. CO-OP. CENTRAL BANK LTD. A.R.M.D. No.268 Estd.1953 MANDYA

**13) ವಿಶೇಷ ಸೂಚನೆಗಳು:**

- ONLINE ಮೂಲಕ ಅರ್ಜಿ ಸಲ್ಲಿಸುವಾಗ ಎಲ್ಲಾ ಮಾಹಿತಿಗಳನ್ನು ಸರಿಯಾಗಿ ಭರ್ತಿ ಮಾಡಿರುವ ಬಗ್ಗೆ ಖಚಿತಪಡಿಸಿಕೊಂಡು ನಂತರ ಅದರ ಒಂದು ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ಭದ್ರವಾಗಿ ತೆಗೆದಿಟ್ಟುಕೊಂಡಿರತಕ್ಕದ್ದು.
- ಈಗಾಗಲೇ ಸೇವೆಯಲ್ಲಿರುವ/ಸೇವೆ ಸಲ್ಲಿಸಿದ ಅಭ್ಯರ್ಥಿಗಳು ಅವರುಗಳ ನೇಮಕಾತಿ ಪ್ರಾಧಿಕಾರದಿಂದ ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕದೊಳಗೆ ಅನುಮತಿಯನ್ನು ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ವಿವರಗಳನ್ನು ಅರ್ಜಿಯಲ್ಲಿ ನಮೂದಿಸತಕ್ಕದ್ದು ಮತ್ತು ಇದೇ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಸಂದರ್ಶನದ/ ಮೂಲ ದಾಖಲಾತಿಗಳ ಪರಿಶೀಲನೆಯ ಸಮಯದಲ್ಲಿ ಹಾಜರು ಪಡಿಸತಕ್ಕದ್ದು. ತಪ್ಪಿದ್ದಲ್ಲಿ ಅನರ್ಹಗೊಳಿಸಲಾಗುವುದು.
- ಆಯಾಯ ಹುದ್ದೆಗಳಿಗೆ ನಿಗದಿಪಡಿಸಿದ ಲಿಖಿತ ಪರೀಕ್ಷೆ ದಿನಾಂಕ ಹಾಗೂ ಪ್ರವೇಶ ಪತ್ರ (Hall Ticket) ಮತ್ತು ಸಂದರ್ಶನ ದಿನಾಂಕಗಳನ್ನು ಬ್ಯಾಂಕಿನ ಜಾಲತಾಣ (WebSite) ದಲ್ಲಿ ಪ್ರಕಟಿಸಲಾಗುವುದು. ಅಭ್ಯರ್ಥಿಗಳು ಜಾಲತಾಣದಲ್ಲಿ ತಿಳಿಸಿರುವ ಸೂಚನೆಗಳನ್ನು ಅನುಸರಿಸಿ ಪ್ರವೇಶ ಪತ್ರ (Hall Ticket) ಪಡೆದು ಲಿಖಿತ ಪರೀಕ್ಷೆ ಹಾಗೂ ಅರ್ಹರಾದಲ್ಲಿ ಸಂದರ್ಶನಕ್ಕೆ ಹಾಜರಾಗತಕ್ಕದ್ದು. ಅಭ್ಯರ್ಥಿಗಳು ಅರ್ಜಿಯಲ್ಲಿ ನೀಡುವ ವಿಳಾಸವೇ ಅಂತಿಮವಾಗಿದ್ದು, ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿಕೊಡಲಾಗುವುದು ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.

**14) ಬ್ಯಾಂಕಿನೊಡನೆ ಪತ್ರ ವ್ಯವಹಾರ:**

ಅಭ್ಯರ್ಥಿತ್ವದ ವಿಚಾರದಲ್ಲಿ ಅಭ್ಯರ್ಥಿಗಳೊಂದಿಗೆ ಬ್ಯಾಂಕು ಯಾವುದೇ ಪತ್ರ ಇ-ಮೇಲ್ ವ್ಯವಹಾರವನ್ನು ನಡೆಸುವುದಿಲ್ಲ.

**15) ದುರ್ನಡತೆ:**

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ / ಸಂದರ್ಶನದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅವನು/ಅವಳು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ; ಹುದ್ದೆಯ ಸಂದರ್ಶನದಿಂದ/ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

**16) ಅಭ್ಯರ್ಥಿಗಳು ಗಮನಿಸಬೇಕಾದ ಅಂಶ:**

ಅಭ್ಯರ್ಥಿಗಳು ಅರ್ಜಿಗಳನ್ನು ಭರ್ತಿ ಮಾಡುವ ಮೊದಲು ಎಲ್ಲಾ ವಿವರಗಳನ್ನು ಓದಿ ಅರ್ಥೈಸಿಕೊಂಡು ಆನಂತವೇ ತಮಗೆ ಅನ್ವಯವಾಗುವ ವಿವರಗಳನ್ನು ಭರ್ತಿ ಮಾಡತಕ್ಕದ್ದು. ಒಮ್ಮೆ ಅರ್ಜಿ ಸಲ್ಲಿಸಿದ ನಂತರ ಅರ್ಜಿಯಲ್ಲಿನ ವಿವರಗಳನ್ನು ತಿದ್ದುಪಡಿ/ ಸೇರ್ಪಡೆ ಮಾಡುವಂತೆ ನೀಡುವ ಯಾವುದೇ ಮನವಿಗಳನ್ನು ತಿರಸ್ಕರಿಸಲಾಗುವುದು. **ಅಭ್ಯರ್ಥಿಗಳು ವಯೋಮಿತಿ, ವಿದ್ಯಾರ್ಹತೆಗೆ ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಕಡ್ಡಾಯವಾಗಿ ಪಡೆದಿಟ್ಟುಕೊಂಡು ಅರ್ಜಿ ಸಲ್ಲಿಸುವಾಗ ದಾಖಲೆಗಳನ್ನು ಸ್ಪಷ್ಟವಾಗಿ ಅಪ್‌ಲೋಡ್ ಮಾಡತಕ್ಕದ್ದು. ಅರ್ಭರ್ಥಿಗಳು ಅಪ್‌ಲೋಡ್ ಮಾಡುವ ದಾಖಲೆಗಳನ್ನು ಮಾತ್ರ ಪರಿಶೀಲನೆ ಮಾಡಲಾಗುವುದು.** ತದನಂತರದಲ್ಲಿ ಮನವಿ ಮುಖಾಂತರ ಯಾವುದೇ ದಾಖಲೆಗಳನ್ನು ಸಲ್ಲಿಸಿದ್ದಲ್ಲಿ ಪರಿಗಣಿಸಲಾಗುವುದಿಲ್ಲ.

**(ಸಿ ವನಜಾಕ್ಷಿ ಕೆ.ಸಿ.ಎಸ್)**
**ಸದಸ್ಯ ಕಾರ್ಯದರ್ಶಿ, ನೇಮಕಾತಿ ಸಮಿತಿ ಹಾಗೂ**
**ಮುಖ್ಯ ಕಾರ್ಯನಿರ್ವಹಣಾಧಿಕಾರಿ**
**ಮಂಡ್ಯ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ., ಮಂಡ್ಯ**

(ಪ.ಜಾ/ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

## ನಮೂನೆ – ಡಿ (ನಿಯಮ ೩ಎ (2) (3) ನೋಡಿ)

**ಅನುಸೂಚಿತ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ/ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ**

### ಪ್ರಮಾಣ ಪತ್ರ

........................................................ ರಾಜ್ಯದ / ಕೇಂದ್ರಾಡಳಿತ ಪ್ರದೇಶದ * ................................ ಜಿಲ್ಲೆಯ /ವಿಭಾಗದ ............................................. ಗ್ರಾಮ/ ಪಟ್ಟಣದ* ನಿವಾಸಿಯಾದ ಶ್ರೀ/ಶ್ರೀಮತಿ ................................ ಎಂಬುವವರ ಮಗ/ಮಗಳಾದ ಶ್ರೀ / ಶ್ರೀಮತಿ ................................. ಇವರು ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ/ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣೀಕರಿಸಿದೆ.

- ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
- ಸಂವಿಧಾನ (ಅನುಸೂಚಿತಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951 (ಅನುಸೂಚಿತಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ರಾಜ್ಯ ಪುನರ್‌ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್‌ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್‌ರಚನಾ ಅಧಿನಿಯಮ, 1971ರ ಮೂಲ ತಿದ್ದುಪಡಿಯಾದಂತೆ)
- ಸಂವಿಧಾನ
- ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956
- ಅನುಸೂಚಿತಜಾತಿ ಮತು ್ತಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.
- ಸಂವಿಧಾನ (ದಾದರ್ ಮತ್ತು ನಾಗರಹವೇಲಿ) ಅನುಸೂಚಿತ ಜಾತಿಗಳ ಆದೇಶ 1962
- ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967
- ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತಜಾತಿ/ಬುಡಕಟ್ಟುಗಳ ಆದೇಶ 1988
- ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ/ಶ್ರೀಮತಿ/ಕುಮಾರಿ * ........................................................ ಮತ್ತು / ಅಥವಾ ಅವನ* / ಅವಳ* ಕುಟುಂಬವು ......................................................ರಾಜ್ಯ/ಕೇಂದ್ರಾಡಳಿತ ಪ್ರದೇಶದ ...................................... ಜಿಲ್ಲಾ/ವಿಭಾಗದ......................................ಗ್ರಾಮ/ಪಟ್ಟಣದ ಸಾಮಾನ್ಯ ನಿವಾಸಿ(ಗಳು)

ಸಹಿ.......................................................

ತಹಶೀಲ್ದಾರ್.........................................

ಸ್ಥಳ : **ಪದನಾಮ**

ದಿನಾಂಕ: **ಕಛೇರಿಯ ಮೊಹರಿನೊಂದಿಗೆ**

**(ಪ್ರವರ್ಗ–1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

# ನಮೂನೆ – ಇ

**(ನಿಯಮ ೩ಎ (2) (೩) ನೋಡಿ)**

**ಹಿಂದುಳಿದ ವರ್ಗಗಳಿಗೆ (ಪ್ರವರ್ಗ–1) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ**

.................................................................................................... ಗ್ರಾಮ / ಪಟ್ಟಣದ / ನಗರ ನಿವಾಸಿಯಾದ ಶ್ರೀ / ಶ್ರೀಮತಿ .................................................................. ಇವರ ಮಗ / ಮಗಳು / ಪತ್ನಿ / ಪತಿಯಾದ ಶ್ರೀ / ಶ್ರೀಮತಿ .................................................................. ಇವರು ಹಿಂದುಳಿದ ವರ್ಗಗಳ (ಪ್ರವರ್ಗ) .................................................. ಜಾತಿಯ .............................. ಉಪಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ :
ದಿನಾಂಕ :

ತಹಶೀಲ್ದಾರ್
ತಾಲ್ಲೂಕು ಕಛೇರಿಯ ಮೊಹರು

**(ಪ್ರವರ್ಗ – 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

## ನಮೂನೆ – ಎಫ್

**(ನಿಯಮ 3ಎ (2) (3)ನ್ನು ನೋಡಿ)**

**ಹಿಂದುಳಿದ ವರ್ಗಗಳಿಗೆ (2ಎ, 2ಬಿ. 3ಎ, 3ಬಿ) ಸೇರಿದ ಅಭ್ಯರ್ಥಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ**

........................................ ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ ........................................ ಇವರ ಮಗ / ಮಗಳು / ಪತಿ / ಪತ್ನಿಯಾದ ಶ್ರೀ / ಶ್ರೀಮತಿ / ಕುಮಾರಿ ........................ ಇವರು ಮತ್ತುಆತನ / ಅವಳ ತಂದೆ / ತಾಯಿ / ಪೋಷಕರು / ಪತ್ನಿ / ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ:ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002 ರಲ್ಲಿ ನಿರ್ದಿಷ್ಟ ಪಡಿಸಿದ ಮೇಲುಸ್ತರದ (ಕ್ರೀಮಿ ಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು;

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕರಾಗಲಿ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1ನೇ ದರ್ಜೆಯಅಥವಾ 2ನೇ ದರ್ಜೆಯಅಧಿಕಾರಿಯಾಗಿಲ್ಲವೆಂದು;

<u>ಅಥವಾ</u>

ಸಾರ್ವಜನಿಕ ವಲಯ ಉದ್ಯಮಯಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ;

ಅಥವಾ

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ.43100-83900/-) ಕಡಿಮೆಯಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು;

ಅಥವಾ

ಆತನ / ಆಕೆಯ ತಂದೆ ತಾಯಿ/ ಪೋಷಕರು / ಪತ್ನಿ / ಪತಿಯ ಆದಾಯವು ಎಂಟು ಲಕ್ಷಮೀರುವುದಿಲ್ಲವೆಂದು;

**<u>ಅಥವಾ</u>**

ಆತನ / ಆಕೆಯ ತಂದೆ ತಾಯಿ / ಪೋಷಕರು / ಪತ್ನಿ / ಪತಿಯ ಆದಾಯವು 8 ಲಕ್ಷ ರುಪಾಯಿಗಳಿಗಿಂತ ಮೀರುವುದಿಲ್ಲವೆಂದು (ಸರ್ಕಾರಿ ಆದೇಶ ಸಂಖ್ಯೆ: ಹಿಂವಕ 304 ಬಿಸಿಎ/2017 ಬೆಂಗಳೂರು , ದಿನಾಂಕ 14.09.2018 ಅಥವಾ ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961 ರಲ್ಲಿ ನಿಗದಿಪಡಿಸಿರುವಂತೆ ಆತ'ನ / ಆಕೆಯ ತಂದೆ ತಾಯಿ / ಪೋಷಕ / ಪತ್ನಿ / ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕ / ಪತ್ನಿ / ಪತಿಯು ಅಥವಾ ಇವರಿಬ್ಬರೂ 10 ಯುನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 25 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಶ್ರೀ / ಶ್ರೀಮತಿ / ಕುಮಾರಿ ........................ ಇವರು ........................ ಜಾತಿಗೆ ........................ ಸೇರಿದ ಉಪಜಾತಿಯವರಾಗಿದ್ದು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ ........................ (2ಎ, 2ಬಿ, 3ಎ, 3ಬಿ)ಕ್ಕೆ ಸೇರಿರುತ್ತಾರೆ. ಮತ್ತು ಈ ಕುಟುಂಬದ ವಾರ್ಷಿಕ ಆದಾಯವು ರೂ. ---- (ರೂ.------------ಮಾತ್ರ) ಎಂದು ಪ್ರಮಾಣೀಕರಿಸಲಾಗಿದೆ.

ಸ್ಥಳ :
ದಿನಾಂಕ:

**ತಹಶೀಲ್ದಾರ್**
**ತಾಲ್ಲೂಕು ಕಛೇರಿಯ ಮೊಹರು**

**ಪ್ರಸ್ತುತವಾಗಿ ಸಂಘ/ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ನೇಮಕಾತಿ ಪ್ರಾಧಿಕಾರಗಳಿಂದ ಪಡೆಯಬೇಕಾದ ನಿರಾಕ್ಷೇಪಣಾ/ ಅನುಮತಿ ಪತ್ರದ ನಮೂನೆ**

**ಸಂಖ್ಯೆ:** **ದಿನಾಂಕ:**

**ನಿರಾಕ್ಷೇಪಣಾ/ ಅನುಮತಿ ಪತ್ರ**

ಶ್ರೀ/ಶ್ರೀಮತಿ__________________________________________________ರವರು ___________________________________________ರಾಜ್ಯ/ಕೇಂದ್ರ ಸರ್ಕಾರ/ಸಂಘ/ ಸಂಸ್ಥೆಯಲ್ಲಿ ದಿನಾಂಕ: _____________ ರಿಂದ ದಿನಾಂಕ: ___________ ರವರೆಗೆ _____________ ಹುದ್ದೆಯಲ್ಲಿ ಖಾಯಂ/ ತಾತ್ಕಾಲಿಕವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಮಂಡ್ಯ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ., ಮಂಡ್ಯ ಇದರ ನೇಮಕಾತಿ ಪ್ರಕಟಣೆ ಸಂಖ್ಯೆ:ಆಡಳಿತ:ಸಿಬ್ಬಂದಿ:ನೇಮಕಾತಿ:09:2023-24, ದಿನಾಂಕ:18-01-2024 ರಂತೆ ಅರ್ಜಿ ಆಹ್ವಾನಿಸಿರುವ ____________________________ ಹುದ್ದೆಗೆ ಅರ್ಜಿ ಸಲ್ಲಿಸಲು ಈ ಸಂಸ್ಥೆ/ಇಲಾಖೆಯಿಂದ ಇವರಿಗೆ ಅನುಮತಿ ನೀಡಲಾಗಿದೆ.

**ಸಹಿ/ ನೇಮಕಾತಿ ಪ್ರಾಧಿಕಾರದ**
**ಇಲಾಖೆಯ ಹೆಸರು ಮತ್ತು ಮೊಹರುನೊಂದಿಗೆ**

# Annexure-3
## Government of Karnataka
## Department of Sainik Welfare and Resettlement

Office of the Deputy Director
Department of Sainik Welfare
and Resettlement (Karnataka)

No. Date:

CERTIFICATE

This is to certify that Sri/ Smt/ Kum _______________ is an applicant for certify _________________ is the spouse/ son/ daughter of No_____ Rank________ Name_________ of Army/Navy/ Air force, who is annex-serviceman according to the definition laid down by the Ministry of Defence, Government of India. He served from_________ to _________

The Ex-serviceman had declared his home town in Karnataka at the time of entryinto service as per records and hence eligible to avail reserved seat under Ex-serviceman Home Address before joining Service.

____________________________

____________________________

Place: Signature of the Deputy Director
Date: Department of sainik Welfare and resettlement
--------------------- (Dist)

-----------------------------------OR-----------------------------------

**CERTIFICATE**

This is to Certify that Shri/Smt/Kum ______________________ is an applicant for ___________________ is the spouse/ son/ daughter of No. ______ Rank_____ Name__________ who died/disabled while in service according to the certificate issuved by the Defence Authority. He died/ disabled on ____________________

The home address of the Individual at the time of joining in Defence service as per records is as under

____________________________

____________________________

Place: Signature of the Deputy Director
Date: Department of sainik Welfare and resettlement
--------------------- (Dist)